**All India Radio: Bangalore**
**Regional Bulletin In Kannada**
**19.03.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**19.03.2025 / 6.40 p.m.**
**<><><><>**

ಮುಖ್ಯಾಂಶಗಳು

1. ಕಂದಾಯ ಇಲಾಖೆಯ ಹಳೇ ಭೂದಾಖಲೆಗಳ ಡಿಜಿಟಲೀಕರಣದಿಂದ ಅಕ್ರಮ ತಡೆ ; ವಿಧಾನಸಭೆಯಲ್ಲಿ ಸಚಿವ ಕೃಷ್ಣಭೈರೇಗೌಡ
2. ವಿಶ್ವ ಜಲ ದಿನ ಮಕ್ಕಳಿಗೆ ನೀರಿನ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವಂತೆ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ
3. ತೊಗರಿ ಖರೀದಿಯ ನೋಂದಣಿ ಅವಧಿ ಇದೇ ೩೧ರವರೆಗೆ ವಿಸ್ತರಿಸಿದ ಕೃಷಿ ಇಲಾಖೆ
4. ಬೃಹತ್ ಬೆಂಗಳೂರು ಮಸೂದೆಗೆ ಸಹಿ ಹಾಕದಂತೆ ರಾಜ್ಯಪಾಲರಿಗೆ ಬಿಜೆಪಿ ನಿಯೋಗ ಮನವಿ

<><><><>

ವಿಧಾನಸಭೆಯಲ್ಲಿ ೨೦೨೫ನೇ ಸಾಲಿನ ಕರ್ನಾಟಕ ಭೂ ಕಂದಾಯ ತಿದ್ದುಪಡಿ ವಿಧೇಯಕವನ್ನು ಕಂದಾಯ ಸಚಿವ ಕೃಷ್ಣೇಭೈರೆಗೌಡ ಇಂದು ಮಂಡಿಸಿದರು. ಬಳಿಕ ಮಾತನಾಡಿದ ಅವರು ಹಳೇ ಭೂದಾಖಲೆಗಳನ್ನ ತಿದ್ದದಂತೆ ಡಿಜಿಟಲೀಕರಣ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಇದರ ಜವಾಬ್ದಾರಿಯನ್ನು ಜಿಲ್ಲಾಧಿಕಾರಿ, ತಹಶೀಲ್ದಾರ್, ಉಪವಿಭಾಗಾಧಿಕಾರಿಗಳಿಗೆ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಭೂದಾಖಲೆಗಳನ್ನು ಅಧಿಕಾರಿಗಳು ತಿದ್ದಿದರೆ, ಶಿಕ್ಷಾರ್ಹ ಅಪರಾಧವಾಗಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ. ಇದರಲ್ಲಿ ಖಾಸಗಿ ವ್ಯಕ್ತಿಗಳು ಭಾಗಿಯಾದರೆ, ಅವರ ವಿರುದ್ಧವೂ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ. ಇನ್ನು ಮುಂದೆ ಭೂದಾಖಲೆಯಲ್ಲಿ ನಿವೇಶನದ ಆಕಾರ ೩೦ಥ ೪೦ ಅಳತೆಯನ್ನು ೧ ಸಾವಿರದ ೨೦೦ ಅಡಿ ಹಾಗೂ ೨೦ಫ೩೦ ಅಳತೆಯನ್ನು ೬೦೦ ಅಡಿ ಎಂದು ನಮೂದಿಸಲಾಗುವುದು ಎಂದು ತಿಳಿಸಿದರು.

**ಧ್ವನಿ: ಕೃಷ್ಣೇಭೈರೆಗೌಡ**

<><><><>

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಗ್ರಾಮ ಪಂಚಾಯತಿ ಅರಿವು ಕೇಂದ್ರಗಳಲ್ಲಿ ಓದುವ ಮಕ್ಕಳಿಗೆ ಬೆಳಕು ಕಾರ್ಯಕ್ರಮದಡಿ ಇದೇ ತಿಂಗಳ ೨೨ ರಂದು 'ವಿಶ್ವ ಜಲ

ದಿನ'ದ ಅಂಗವಾಗಿ ನೀರಿನ ಮಹತ್ವ, ಮಿತ ಬಳಕೆ ಮತ್ತು ಸಂರಕ್ಷಣೆ, ಮಳೆ ನೀರು ಕೊಯ್ಲು ಹಾಗೂ ಸಂಗ್ರಹಣೆ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಈ ವಿಷಯ ತಿಳಿಸಿದ್ದಾರೆ. ಕುಡಿಯುವ ನೀರಿನ ಪೂರೈಕೆ ಕುರಿತು ಗ್ರಾಮಗಳಲ್ಲಿ ಮಕ್ಕಳಿಗೆ ಕ್ಷೇತ್ರ ಭೇಟಿ ವ್ಯವಸ್ಥೆ ಮಾಡಿಸುವಂತೆ ಸಚಿವರು ಸೂಚಿಸಿದ್ದಾರೆ. ಮಾರ್ಚ್ ೨೧ರಂದು 'ವಿಶ್ವ ಅರಣ್ಯ ದಿನದ ಹಿನ್ನೆಲೆಯಲ್ಲಿ ಸಾಮಾಜಿಕ ಅರಣ್ಯ ಇಲಾಖೆಯ ಸಹಯೋಗದಿಂದ ಶಾಲಾ ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಅಂದು ಪ್ರತಿ ಮಕ್ಕಳೂ ಒಂದೊಂದು ಸಸಿ ನೆಟ್ಟು ಆ ಸಸಿಗಳನ್ನು ದತ್ತು ತೆಗೆದುಕೊಂಡು, ಪೋಷಿಸುವಂತೆ ಮಕ್ಕಳಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕೆಂದು ನಿರ್ದೇಶನ ನೀಡಿದ್ದಾರೆ.

<><><><>

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ತೊಗರಿ ಖರೀದಿಯ ನೋಂದಣಿ ಅವಧಿಯನ್ನು ಇದೇ ೩೧ರವರೆಗೆ ವಿಸ್ತರಣೆ ಮಾಡಲಾಗಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ಇದುವರೆಗೆ ನೋಂದಣಿ ಮಾಡಿಕೊಳ್ಳದ ರೈತರು ತಕ್ಷಣ ಸಮೀಪದ ಪ್ರಾಥಮಿಕ ಪತ್ತಿನ ಸಹಕಾರ ಸಂಘ, ರೈತ ಉತ್ಪಾದಕರ ಕಂಪನಿ, ತಾಲೂಕು ಹುಟ್ಟುವಳಿ ಸಹಕಾರ ಸಂಘಗಳಲ್ಲಿ ನೋಂದಣಿ ಮಾಡಿಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ. ರೈತರಿಗೆ ಪ್ರತಿ ಕ್ವಿಂಟಾಲ್ ತೊಗರಿಗೆ ತೊಗರಿಗೆ ೮ ಸಾವಿರ ರೂಪಾಯಿ ಪಾವತಿ ಮಾಡಲಾಗುವುದು ಎಂದು ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ಬೆಂಗಳೂರಿನ ಕಂದಾಯ ಇಲಾಖೆ, ಬೆಳಗಾವಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಪೊಲೀಸ್ ಇಲಾಖೆ ಸಹಯೋಗದೊಂದಿಗೆ ವಿಜಯಪುರ ಜಿಲ್ಲೆ ಕೂಡ್ಗಿಯಲ್ಲಿ ಎನ್‌ಟಿಪಿಸಿಯ ಜಿಲ್ಲಾ ಮಟ್ಟದ ಅಣುಕು ವಿಪತ್ತು ನಿರ್ವಹಣ ಕಾರ್ಯಾಚರಣೆ ಯಶಸ್ವಿಯಾಗಿ ನಡೆಯಿತು. ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆ ತಂಡವು ಬೆಂಕಿಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಅಣಕು ಪ್ರದರ್ಶನ ನೀಡಿತು ಮತ್ತು  ಎನ್‌ಡಿಆರ್‌ಎಫ್ ತಂಡವು ಕುಸಿದ ಕಟ್ಟಡಗಳಿಂದ ಸಿಲುಕಿದವರ ರಕ್ಷಣೆಯ ಅಣುಕು ಕಾರ್ಯಾಚರಣೆ ನಡೆಸಿತು. ಇದೇ ವೇಳೆ, ಎನ್‌ಡಿಆರ್‌ಎಫ್ ತಂಡ ಶ್ವಾನ ಹಾಗೂ ತಾಂತ್ರಿಕ ವಿಧಾನಗಳ ಮೂಲಕ ಶೋಧಕಾರ್ಯ ಹೇಗೆ ನಡೆಸಬಹುದು ಎಂಬುದನ್ನು ತಿಳಿಸಿತು.

<><><><>

ಕಲಬುರಗಿ ಜಿಲ್ಲೆಯ ವಾಡಿ ಪೊಲೀಸ್ ಠಾಣೆಯಲ್ಲಿ ಪೊಲೀಸರು ಇಸ್ಪೀಟ್ ಆಟದಲ್ಲಿ ನಿರತರಾಗಿರುವ ವಿಡಿಯೋ ದೃಶ್ಯಗಳು ವೈರಲ್ ಆಗಿರುವ ಹಿನ್ನೆಲೆಯಲ್ಲಿ ಪೊಲೀಸ್ ಸಿಬ್ಬಂದಿಯನ್ನು

ಅಮಾನತುಗೊಳಿಸಲಾಗಿದೆ. ಠಾಣೆಯ ಸಬ್ ಇನ್ಸ್ಪೆಕ್ಟರ್‌ಗೆ ನೋಟಿಸ್ ಜಾರಿಗೊಳಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಇಲಾಖೆಯ ಯಾವುದೇ ಸಿಬ್ಬಂದಿ, ಅಧಿಕಾರಿಗಳ ಶಿಸ್ತು ಉಲ್ಲಂಘನೆಯನ್ನು ಸರ್ಕಾರ ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. ಸಾರ್ವಜನಿಕ ಸೇವೆಯಲ್ಲಿ ಹಾಗೂ ಕಾನೂನು ಪಾಲನೆಯಲ್ಲಿ ಲೋಪ ಸಹಿಸಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.

<><><><>

ರಾಜ್ಯದಲ್ಲಿ ಇದೇ ೨೧ ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಯಲಿದ್ದು, ಏಪ್ರಿಲ್ ೪ಕ್ಕೆ ಅಂತ್ಯಗೊಳ್ಳಲಿದೆ. ಶುಕ್ರವಾರ ಪ್ರಥಮ ಭಾಷೆ ಕನ್ನಡ, ಸಂಸ್ಕೃತ, ಹಿಂದಿ ಮತ್ತು ಉರ್ದು ಪರೀಕ್ಷೆ ನಡೆಯಲಿದೆ. ಜಿಲ್ಲಾಡಳಿತ ಸಕಲ ಸಿದ್ಧತೆ ನಡೆಸಿದ್ದು, ಪರೀಕ್ಷೆ ನಡೆಯುವ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿವೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ೫೨ ಕೇಂದ್ರಗಳನ್ನು ಸಿದ್ದಪಡಿಸಲಾಗಿದ್ದು. ಈ ವರ್ಷ ಒಟ್ಟು ೧೩ ಸಾವಿರದ ೩೮೩ ವಿಧ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ತಿಳಿಸಿದ್ದಾರೆ. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಆಯಾ ಕೇಂದ್ರಗಳ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದ್ದಾರೆ. ಚಿತ್ರದುರ್ಗ ಜಿಲ್ಲೆಯಲ್ಲಿ ೨೪ ಸಾವಿರದ ೪೧೬ ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯಲಿದ್ದು, ಇದಕ್ಕಾಗಿ ೮೨ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದ್ದಾರೆ.

<><><><>

ಬೃಹತ್ ಬೆಂಗಳೂರು ಆಡಳಿತ ಮಸೂದೆಗೆ ಬಿಜೆಪಿ ವಿರೋಧ ವ್ಯಕ್ತಪಡಿಸಿದೆ. ರಾಜ್ಯಪಾಲರನ್ನು ಭೇಟಿ ಮಾಡಿ ಮಸೂದೆಗೆ ಸಹಿ ಹಾಕದಂತೆ ಬಿಜೆಪಿ ನಿಯೋಗ ಮನವಿ ಸಲ್ಲಿಸಿದೆ. ರಾಜ್ಯಪಾಲರ ಭೇಟಿ ಬಳಿಕ ಮಾತನಾಡಿದ ಆರ್.ಅಶೋಕ, ನಿಯಮಾನುಸಾರವಿಲ್ಲದೆ ಅಂಗೀಕರಿಸಿರುವ ಗ್ರೇಟರ್ ಬೆಂಗಳೂರು ಬಿಲ್ ಪರಿಷ್ಕರಿಸುವಂತೆ ಮನವಿ ಮಾಡಲಾಗಿದೆ. ಬೆಂಗಳೂರನ್ನು ಯಾವುದೇ ಕಾರಣಕ್ಕೂ ಒಡೆಯಬಾರದು ಎಂದು ತಿಳಿಸಿದ್ದಾರೆ. ಈ ವಿಚಾರವನ್ನ ರಾಜ್ಯಪಾಲರಿಗೆ ಮನವರಿಕೆ ಮಾಡಲಾಗಿದ್ದು, ರಾಜ್ಯಪಾಲರು ತಮ್ಮ ಮನವಿಗೆ ಸ್ಪಂದಿಸಿದ್ದಾರೆ ಎಂದು ಹೇಳಿದ್ದಾರೆ.

<><><><>

ರಾಜ್ಯದಲ್ಲಿ ಈ ಬಾರಿ ಉಷ್ಣಾಂಶ ಹೆಚ್ಚಾಗಿದ್ದು, ಬಿಸಿಲಿನ ದಗೆಯಿಂದ ಜನ ತತ್ತರಿಸಿ ಹೋಗಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ೪ ತಾಲ್ಲೂಕುಗಳ ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಿದೆ ಎಂದು ಜಿಲ್ಲಾಧಿಕಾರಿ ಎ.ಬಿ ಬಸವರಾಜು ತಿಳಿಸಿದ್ದಾರೆ. ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ೯೮ ಜನವಸತಿಗಳನ್ನು ಗುರುತಿಸಲಾಗಿದ್ದು, ೨೩೪ ಖಾಸಗಿ ಹಾಗೂ ರೈತರ ಕೊಳವೆ ಬಾವಿಗಳನ್ನು

ಗುರುತಿಸಿ ಪರ್ಯಾಯವಾಗಿ ಕುಡಿಯುವ ನೀರು ಪೂರೈಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು. ಬಿಸಿಲಿನ ಪ್ರಖರತೆ ಹೆಚ್ಚುತ್ತಿದ್ದು, ಬಿಸಿಗಾಳಿ, ಶಾಖದಿಂದ ಆರೋಗ್ಯ ರಕ್ಷಣೆಗೆ ಸಾರ್ವಜನಿಕರು ಹೆಚ್ಚಿನ ಮುಂಜಾಗ್ರತೆ ವಹಿಸಬೇಕು ಎಂದು ಕೋಲಾರ ಜಿಲ್ಲಾ ಸಾಂಕ್ರಾಮಿಕ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಬಿ.ಹೆಚ್.ರವಿಕುಮಾರ್ ತಿಳಿಸಿದ್ದಾರೆ. ಮಾರ್ಚ್, ಏಪ್ರಿಲ್, ಮೇ ತಿಂಗಳ ಅಂತ್ಯದವರೆಗೆ ಬಿಸಿಲಿನ ತಾಪಮಾನ ಹೆಚ್ಚಾಗುವ ಹಿನ್ನೆಲೆಯಲ್ಲಿ ಪ್ರತಿಯೊಬ್ಬರೂ ೨೦ ನಿಮಿಷಕ್ಕೊಮ್ಮೆ ನೀರು ಕುಡಿಯುವ ಅಭ್ಯಾಸ ಮಾಡಿಕೊಳ್ಳಬೇಕು ಎಂದು ವಿಜಯನಗರ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಲ್.ಆರ್.ಶಂಕರನಾಯ್ಕ ಸಲಹೆ ನೀಡಿದ್ದಾರೆ.

<><><><>

ಭಾರತದ ಆರ್ಥಿಕತೆಯ ಸದೃಢತೆಯಲ್ಲಿ ಹೈನುಗಾರಿಕೆ ಪ್ರಮುಖವಾಗಿದೆ ಎಂದು ಹೆಸರಘಟ್ಟದ ಪಶುಸಂಗೋಪನಾ ಉತ್ಕೃಷ್ಠತಾ ಕೇಂದ್ರದ ಜಂಟಿ ಆಯುಕ್ತ ಡಾ. ಹೆಚ್. ತೆಗ್ಗಿ ಹೇಳಿದ್ದಾರೆ. ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದಲ್ಲಿ ರೈತರಿಗಾಗಿ ಹಮ್ಮಿಕೊಂಡಿದ್ದ ವೈಜ್ಞಾನಿಕ ಪಶುಪಾಲನ ಪದ್ಧತಿಗಳ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ದೇಶದ ಜಿಡಿಪಿಗೆ ಹೈನು ಉದ್ಯಮ ಶೇಕಡ ೪ ರಷ್ಟು ಕೊಡುಗೆ ನೀಡುತ್ತಿದೆ. ರೈತರ ಆದಾಯವನ್ನು ದ್ವಿಗುಣಗೊಳಿಸುವಲ್ಲಿ ಹೈನುಗಾರಿಕೆ ಮೊದಲ ಸಾಲಿನಲ್ಲಿದೆ ಎಂದು ತಿಳಿಸಿದ್ದಾರೆ.

<><><><>

ಉತ್ತರ ಕನ್ನಡ ಜಿಲ್ಲೆಯ ಬನವಾಸಿಯಲ್ಲಿ ಏಪ್ರಿಲ್ ೧೨ ಮತ್ತು ೧೩ ರಂದು ಕದಂಬೋತ್ಸವ ಆಯೋಜಿಸಲಾಗಿದೆ. ಉತ್ಸವವನ್ನು ಯಶಸ್ವಿಗಾಗಿ ರಚಿಸಲಾಗಿರುವ ಎಲ್ಲಾ ಸಮಿತಿಗಳು ತಮ್ಮ ವ್ಯಾಪ್ತಿಯಲ್ಲಿ ಕೂಡಲೇ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚನೆ ನೀಡಿದ್ದಾರೆ. ಯಾವುದೇ ಸಮಿತಿಗೆ ಹಣಕಾಸಿನ ಅಗತ್ಯವಿದ್ದಲ್ಲಿ ಈ ಬಗ್ಗೆ ಅಂದಾಜು ಪಟ್ಟಿಯನ್ನು ಸಿದ್ದಪಡಿಸಿ ಕೂಡಲೇ ಸಲ್ಲಿಸುವಂತೆ ತಿಳಿಸಿದ್ದಾರೆ. ಕದಂಬೋತ್ಸವ ಅಂಗವಾಗಿ ನಡೆಯುವ ಕ್ರೀಡಾ ಸ್ಪರ್ಧೆಗಳನ್ನು ಅತ್ಯಂತ ವ್ಯವಸ್ಥಿತವಾಗಿ ಆಯೋಜಿಸುವಂತೆ ನಿರ್ದೇಶನ ನೀಡಿದ್ದಾರೆ.

<><><><>

ಕರ್ನಾಟಕದ ಸಾರಿಗೆ ನಿರ್ವಾಹಕನ ಮೇಲೆ ಮರಾಠಿಗರ ದಾಳಿ ಪ್ರಕರಣದ ಸಮಗ್ರ ತನಿಖೆ ಹಾಗೂ ರಾಜ್ಯದಲ್ಲಿ ಎಂಇಎಸ್ ನಿಷೇಧ ಮಾಡುವಂತೆ ಆಗ್ರಹಿಸಿ ಇದೇ ೨೨ ರಂದು ಕರೆ ನೀಡಲಾಗಿರುವ ಬಂದ್‌ಗೆ ಸಹಕರಿಸುವಂತೆ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಮನವಿ ಮಾಡಿದ್ದಾರೆ. ಮೈಸೂರಿನಲ್ಲಿ ಕೆಎಸ್‌ಆರ್‌ಟಿಸಿ ಚಾಲಕರು, ನಿರ್ವಾಹಕರನ್ನು ಭೇಟಿ ಮಾಡಿದ ವಾಟಾಳ್ ನಾಗರಾಜ್, ಹೋರಾಟದಲ್ಲಿ ಭಾಗಿಯಾಗುವಂತೆ ಕೋರಿದ್ದಾರೆ. ಬಳಿಕ ಮಾತನಾಡಿದ

ಅವರು, ಬೆಳಗಾವಿ ಕನ್ನಡಿಗರ ಕೈಯಲ್ಲಿ ಇಲ್ಲ ಮರಾಠಿಗರ ಕೈಯಲ್ಲಿ ಇದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರಿನ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಅಂಗಳದಲ್ಲಿ ತಿಂಗಳ ಪುಸ್ತಕ ಕಾರ್ಯಕ್ರಮದಲ್ಲಿ ಡಾ. ಧರಣೀದೇವಿ ಮಾಲಗತ್ತಿ ಅವರ ಇಳಾಭಾರತಂ ಕಾವ್ಯಾವಲೋಕನ ನಡೆಯಲಿದೆ.
2. ಅನ್ನಭಾಗ್ಯ ಯೋಜನೆಯಡಿ ಪಡಿತರದಾರರಿಗೆ ವಿತರಿಸಲಾಗುವ ಪಡಿತರ ಅಕ್ಕಿಯ ದುರುಪಯೋಗವಾಗದಂತೆ ಎಲ್ಲಾ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಉತ್ತರ ಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚನೆ ನೀಡಿದ್ದಾರೆ.
3. ಆನ್‌ಲೈನಲ್ಲಿ ವಸ್ತುಗಳನ್ನು ಖರೀದಿಸುವುದರಿಂದ ಮೋಸ ಹೋಗುವ ಸಾಧ್ಯತೆಗಳಿದ್ದು, ಗ್ರಾಹಕರು ಜಾಗರೂಕರಾಗಿರಬೇಕು ಎಂದು ಚಿತ್ರದುರ್ಗ ಕಾನೂನು ಸೇವಾ ಪ್ರಾದಿಕಾರದ ಅಧ್ಯಕ್ಷ ಹಿರಿಯ ಸಿವಿಲ್ ನ್ಯಾಯಾಧೀಶ ವಿಜಯ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>